**ಸಂಖ್ಯೆ** ಕಂಇ 158 ಟಿಎನ್ ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:18.05.2020.

**ಆದೇಶ**

ಕೇಂದ್ರೀಯ ಗೃಹ ಮಂತ್ರಾಲಯವು ಕೋವಿಡ್-19 ಸೋಂಕು ಹರಡುವಿಕೆಯನ್ನು ನಿಯಂತ್ರಿಸಲು ಲಾಕ್‌ಡೌನ್ ಅವಧಿಯನ್ನು ದಿ.31.05.2020ರವರೆಗೆ ವಿಸ್ತರಿಸಿ, ಲಾಕ್ ಡೌನ್ ಕ್ರಮಗಳ ಕುರಿತು ಆದೇಶ ಸಂಖ್ಯೆ 40-3 / 2020-ಡಿಎಂ-ಐ, ದಿ. 17.05.2020ರಲ್ಲಿ ಮಾರ್ಗಸೂಚಿಗಳನ್ನು ಹೊರಡಿಸಿದ್ದು,ಇವುಗಳು ದಿ.18.05.2020 ರಿಂದ ದಿ.31.05.2020ರವರೆಗೆ ಜಾರಿಯಲ್ಲಿರುತ್ತವೆ. ಇದರ ಪರಿಣಾಮವಾಗಿ ರಾಜ್ಯ ಸರ್ಕಾರವು ಆದೇಶ ಸಂಖ್ಯೆ ಕಂಇ 158 ಟಿಎನ್‌ಆರ್ 2020, ದಿ.18.05.2020ರಂದು ಕೋವಿಡ್- 19 ಸೋಂಕು ಹರಡುವಿಕೆಯನ್ನು ನಿಯಂತ್ರಿಸಲು ಲಾಕ್‌ಡೌನ್ ಕ್ರಮಗಳ ಕುರಿತು ಮಾರ್ಗಸೂಚಿಗಳನ್ನು ಹೊರಡಿಸಿದ್ದು, ಇವುಗಳು ರಾಜ್ಯಾದ್ಯಂತ ದಿ.18.05.2020 ರಿಂದ ದಿ.31.05.2020ರವರೆಗೆ ಜಾರಿಯಲ್ಲಿರುತ್ತವೆ.

ಸದರಿ ಆದೇಶದ ಮಾರ್ಗಸೂಚಿಗಳ ಕ್ರಮ ಸಂ.3(vi)ರಲ್ಲಿ ಈ ಕೆಳಕಂಡಂತೆ ಪ್ರಸ್ತಾಪಿಸಲಾಗಿದೆ.

> *"ಈ ಮಾರ್ಗಸೂಚಿಗಳು ಮತ್ತು ರಾಷ್ಟ್ರೀಯ ನಿರ್ದೇಶನಗಳಿಗೆ (ಅನುಬಂಧ -2) ಒಳಪಟ್ಟ ನಿರ್ದಿಷ್ಟ ಸಮಯಗಳ ನಡುವೆ ಸರ್ಕಾರಿ / ಪುರಸಭೆಯ ಉದ್ಯಾನಗಳು ಸಾರ್ವಜನಿಕರಿಗಾಗಿ ತೆರೆದಿರುತ್ತವೆ."*

ಮೇಲ್ಕಂಡ ಅವಕಾಶಗಳನ್ವಯ ಕಂಟೈನ್ಮೆಂಟ್ ವಲಯಗಳನ್ನು ಹೊರತುಪಡಿಸಿ, ರಾಜ್ಯಾದ್ಯಂತ ಎಲ್ಲಾ ಸರ್ಕಾರಿ/ಪುರಸಭೆ ಉದ್ಯಾನವನಗಳನ್ನು ಬೆಳಿಗ್ಗೆ 7 ರಿಂದ 9ಗಂಟೆಯವರೆಗೆ ಮತ್ತು ಸಂಜೆ 4 ರಿಂದ 7ಗಂಟೆಯವರೆಗೆ ಸಾರ್ವಜನಿಕರಿಗಾಗಿ ತೆರೆಯಲಾಗಿರುತ್ತವೆ ಎಂದು ಈ ಮೂಲಕ ಅಧಿಸೂಚಿಸಿ ಆದೇಶಿಸಿದೆ.

**(ಟಿ.ಕೆ.ಅನಿಲ್ ಕುಮಾರ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ
ಸದಸ್ಯ ಕಾರ್ಯದರ್ಶಿ,
ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ
ಪ್ರಾಧಿಕಾರದ ರಾಜ್ಯ ಕಾರ್ಯಕಾರಿ ಸಮಿತಿ

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

Scanned with CamScanner